# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 221(1526)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಗೋವಿಂದರಾಜ್(ವಿಧಾನ ಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮುಖ್ಯಮಂತ್ರಿಗಳು

ವಿಷಯ : ಪಾದಚಾರಿ ಮಾರ್ಗಗಳಲ್ಲಿನ ಟ್ರಾನ್ಸ್‌ಫಾರ್ಮರ್‌ನಿಂದಾಗಿ ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲ ಸರಿಪಡಿಸುವ ಬಗ್ಗೆ

(ಅ) ಬೆಂಗಳೂರು ನಗರದ ರಸ್ತೆಗಳ ಪಾದಚಾರಿ ಮಾರ್ಗಗಳಲ್ಲಿ, ರಸ್ತೆಗಳ ಮಧ್ಯೆ ಹಾಗೂ ರಸ್ತೆಗಳ ಇಕ್ಕೆಲಗಳಲ್ಲಿ ಸ್ಥಾಪಿಸಲಾಗಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಅಂದಾಜು ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ವಲಯವಾರು ಪ್ರತ್ಯೇಕ ಮಾಹಿತಿ ಒದಗಿಸುವುದು;

(ಆ) ಬೆಂಗಳೂರು ನಗರದ ಜನನಿಬೀಡ ರಸ್ತೆಗಳು ಮತ್ತು ರಸ್ತೆಗಳ ಪಾದಚಾರಿ ಮಾರ್ಗಗಳಲ್ಲಿ ಹಾಗೂ ರಸ್ತೆಗಳ ಮಧ್ಯೆ ಹಾಗೂ ರಸ್ತೆಗಳ ಇಕ್ಕೆಲಗಳಲ್ಲಿ ಅಪಾಯವಾಗಿರುವ ಟ್ರಾನ್ಸ್‌ಫಾರ್ಮರ್‌ಗಳಿಂದಾಗಿ, ಪಾದಚಾರಿಗಳಿಗೆ /ವಾಹನ ಸವಾರರುಗಳಿಗೆ ಆಗುತ್ತಿರುವ ಅನಾನುಕೂಲದ ಬಗ್ಗೆ ಸರ್ಕಾರವು ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತಾದ ಮಾಹಿತಿ ಒದಗಿಸುವುದು;

(ಇ) ಸಾರ್ವಜನಿಕರ ಹಿತದೃಷ್ಟಿಯಿಂದ ಪಾದಚಾರಿ ಮಾರ್ಗಗಳಲ್ಲಿನ ರಸ್ತೆಗಳ ಮಧ್ಯೆ ಹಾಗೂ ರಸ್ತೆಗಳ ಇಕ್ಕೆಲಗಳಲ್ಲಿರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಳಾಂತರಗೊಳಿಸುವ / ಪ್ರತ್ಯೇಕ ವ್ಯವಸ್ಥೆ ಬಗ್ಗೆ ಸರ್ಕಾರವು ಗಂಭೀರವಾದ ಕ್ರಮದ ಬಗ್ಗೆ ಯೋಜನೆ ರೂಪಿಸಿದೆಯೇ; ಹಾಗಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? (ಮಾಹಿತಿ ಒದಗಿಸುವುದು)